# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಜಿ.ಎಂ.ಶಬೀರ್ ಅಹಮ್ಮದ್, ಮುಖ್ಯ ಯೋಜನಾಧಿಕಾರಿ(ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯ ಲೋಪಕ್ಕೆ ಸಂಬಂಧಿಸಿದಂತೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: (1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ:ಜಿಪಂಚಿ/ಆಡಳಿತ.ಅ.ವಿ.ಶಿ.ಕ/ಸಿಆರ್/2014-15,ದಿ:22-6-2015.

(2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 221 ವಿಸೇಬಿ 2015, ದಿನಾಂಕ:06-02-2015.

(3) ಆಪಾದಿತರ ಲಿಖಿತ ಹೇಳಿಕೆ ದಿನಾಂಕ:03-04-2017.

-000-

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮಸಂಖ್ಯೆ:(1)ರ ದಿನಾಂಕ:22-6-2015 ರ ಪತ್ರದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮುಖ್ಯ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ 2011-12ನೇ ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಸೋಲಾರ್ ದೀಪಗಳನ್ನು ಖರೀದಿಸಿ ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ 21/ಗ್ರಾಪಸ/2013, ಬೆಂಗಳೂರು, ದಿನಾಂಕ:20-02-2013ರ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ಲೋಪವನ್ನು ಎಸಗಿರುವ ಹಾಗೂ ಇತರೆ ಆರೋಪಗಳಿಗೆ ಸಂಬಂಧಿಸಿದಂತೆ ಕರ್ತವ್ಯ ನಿರ್ಲಕ್ಷತೆ ತೋರಿರುವ ಸದರಿ ಪ್ರಕರಣಕ್ಕೆ ಸಂಬಂಧಿಸಿದ ದುರುಪಯೋಗಕ್ಕೆ ಕಾರಣರಾಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಾವಳಿ 1966ರ ನಿಯಮ 3(1)ರ ಉಪನಿಯಮ (i),(ii),(iii) ಅನ್ನು ಉಲ್ಲಂಘಿಸಿರುರುವ ಆರೋಪಗಳಿಗೆ ಸಂಬಂಧಿಸಿದಂತೆ ಸದರಿ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಸರ್ಕಾರದ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ನಿರ್ಲಕ್ಷತೆ ತೋರಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವನಿಮೆ) ನಿಯಮಗಳು 1957ರ ನಿಯಮ 11 ರಡಿಯಲ್ಲಿ ಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣ ಪಟ್ಟಿಯನ್ನು ದಿ:14-02-2017 ರಂದು ಹೊರಡಿಸಿ ದಿನಾಂಕ:27-03-2017 ರಂದು ಜಾರಿಗೊಳಿಸಲಾಗಿತ್ತು.

ಸದರಿ ನೋಟೀಸ್‌ಗೆ ಮೇಲ್ಕಂಡ ಆಪಾದಿತ ಅಧಿಕಾರಿಯಾದ ಶ್ರೀ ಜಿ.ಎಂ.ಶಬೀರ್ ಅಹಮ್ಮದ್, ಮುಖ್ಯ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರು ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ತಮ್ಮ ವಿರುದ್ಧದ ಆರೋಪವನ್ನು ನಿರಾಕರಿಸುತ್ತಾ, ಆರೋಪ ಮುಕ್ತರನ್ನಾಗಿಸಲು ಕೋರಿರುತ್ತಾರೆ. ಆಪಾದಿತರ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಪ್ರಕರಣದಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ನಿರ್ಲಕ್ಷತೆ ತೋರಿರುವ ಗಂಭೀರ ಸ್ವರೂಪದ ಆರೋಪಗಳಿರುವುದರಿಂದ ಆಪಾದಿತರ ವಿರುದ್ಧದ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 221 ವಿಸೇಬಿ 2015 ಬೆಂಗಳೂರು,ದಿನಾಂಕ:15-06-2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಜಿ.ಎಂ.ಶಬೀರ್ ಅಹಮ್ಮದ್, ಮುಖ್ಯ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

..2

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಗಳ ನಿಯಮ 11(2) ರ ಪ್ರಕಾರ ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಉಪ ಕಾರ್ಯದರ್ಶಿ(ಆಡಳತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತ ಅಧಿಕಾರಿ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ / ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/42/ಸೇಇವಿ/2014, ದಿನಾಂಕ:08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ.15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/06/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಐ&ಸಿ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಪ್ರಧಾನ ಮಹಾಲೇಖಪಾಲರು (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು/ ಚಿಕ್ಕಬಳ್ಳಾಪುರ
3) ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು, ನಂ.245, 8ನೇ ಮೇನ್, ಜುಡಿಷಿಯಲ್ ಲೇಔಟ್,ಶಿವನಗರ, ತಲಘಟ್ಟಪುರ ಬೆಂಗಳೂರು-560062
4) ಉಪ ಕಾರ್ಯದರ್ಶಿ(ಆಡಳತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ(ಮಂಡನಾಧಿಕಾರಿ).
5) ಆಪಾದಿತ ಅಧಿಕಾರಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ.ಚಿಕ್ಕಬಳ್ಳಾಪುರ ಇವರ ಮುಖಾಂತರ)

ಪ್ರತಿಯನ್ನು:-

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.